ಮೈಮೇಲೆ ಹರಿದ ಬಟ್ಟೆ ಇದ್ದರೂ ಚಿಂತೆಯಿಲ್ಲ, ಕೈಯಲ್ಲೊಂದು ಕನ್ನಡ ಪತ್ರಿಕೆ ಇರಲಿ.
ಡಿ..ವಿ.ಜಿ.

**ಮೈಕ್ರೋ ನ್ಯೂಸ್**

## ಫೆ.1 ಕ್ವಾರಿ ಕಾರ್ಮಿಕರ ಬೃಹತ್ ಪ್ರತಿಭಟನೆ

**ಹಂಪಿ ಟೈಮ್ಸ್ ಹೂವಿನಹಡಗಲಿ**




ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕಾರ್ಮಿಕರ ವಿವಿಧ ಬೇಡಿಕೆಗಳ ಈಡೇರಿಸುವಂತೆ. ಫೆ.1 ರಂದು 10:30 ಕ್ಕೆ ಬೆಂಗಳೂರಿನ ಫ್ರೀಡಂ ಪಾರ್ಕನಲ್ಲಿ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಧನ ಸಹಾಯ ಕಡಿತ ಹಾಗೂ ಕಳಪೆ ಗುಣಮಟ್ಟದ ಆರೋಗ್ಯ ತಪಾಸಣೆ ಯನ್ನು ವಿರೋಧಿಸಿ ಬಹಿರಂಗ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಸಮಿತಿ ಸದಸ್ಯ ಹಲಗಿ ಸುರೇಶ ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು ನೈಜ ಕಟ್ಟಡ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಧನ ಸಹಾಯವನ್ನು ಶೇಕಡ 75ರಷ್ಟು ಕಡಿತ ಮಾಡಿರುವುದನ್ನು ಕೈ ಬಿಟ್ಟು ಈ ಹಿಂದೆ ಇದ್ದ ಶೈಕ್ಷಣಿಕ ಧನ ಸಹಾಯವನ್ನು ಮುಂದುವರಿಸಬೇಕು 2022–23ನೇಸಾಲಿನಲ್ಲಿ ಕಡಿತ ಗೊಳಿಸಿರುವ ಬಾಕಿ ಹಣವನ್ನು ಜಮ ಮಾಡಬೇಕು. ಈಗಾಗಲೇ ಖಾಸಗೀಯವರಿಂದ ಆರೋಗ್ಯ ತಪಸಣೆ ನಡೆಸುವ ಕಾರ್ಯಕ್ರಮ ವನ್ನು ತಕ್ಷಣ ನಿಲ್ಲಿಸಿ ಬಿಡುಗಡೆ ಮಾಡಿರುವ ಹಣವನ್ನು ವಾಪಸ್ ಪಡೆಯಬೇಕು. ಆರೋಗ್ಯ ಇಲಾಖೆಯಿಂದ ಉಚಿತ ತಪಾಸಣೆ ನಡೆಸಬೇಕು. 2016ರಿಂದ ಬಾಕಿ ಇರುವ ಎಲ್ಲ ಸೌಲಭ್ಯಗಳ ಧನ ಸಹಾಯವನ್ನು ಕೂಡಲೇ ವಿಲೇವಾರಿ ಮಾಡಬೇಕು. ಈಗಾಗಲೇ 60ವರ್ಷ ತುಂಬಿರುವ ಫಲಾನುಭವಿಗಳಿಗೆ ಪಿಂಚಣಿಗೆ ಅರ್ಜಿ ಸಲ್ಲಿಸಲು ವಯೋಮಿತಿ ಯನ್ನು ನಿಗದಿ ಮಾಡಬಾರದು. 60ವರ್ಷ ತುಂಬಿದ ನಂತರ ಯಾವಾಗ ಬೇಕಾದರೂ ಅರ್ಜಿ ಸಲ್ಲಿಸಿದರೂ ಪಿಂಚಣಿಯನ್ನು ನಿಡಬೇಕು. ಪಿಂಚಣಿಯನ್ನು ಆರು ಸಾವಿರ ನಿಗದಿ ಮಾಡಬೇಕು. ಆರೋಗ್ಯ ತಪಾಸಣೆಯ ಲಾಭವನ್ನು ಭೋಗಸ್ ಕಾರ್ಡು ದಾರರು ಲಾಭಪಡೆಯುತ್ತಿದ್ದು ಈದನ್ನು ಕೂಡಲೆ ನಿಲ್ಲಿಸಿ ನಿಜ ಕಾರ್ಮಿಕರಿಗೆ ಸಿಗಬೇಕೆಂದು ಹಾಗೂ ಆಲ್ ಇಂಡಿಯ ಟ್ರೇಡ್ ಯೂನಿಯನ್ ಕಾಂಗ್ರೆಸ್ AITUC ಭ್ಯಾನರ್ ಅಡಿಯಲ್ಲಿ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು. ಹಾಗೆಯೇ ನಮ್ಮ ಸಹೋದರ ಸಂಘಟನೆ ಗಳಾದ. ಅಂಗನವಾಡಿ ಕಾರ್ಯಕರ್ತೆಯರು. ಬಿಸಿಯೂಟ ತಯಾರಕರ ಸಂಘನೆ. ಆಶಾ ಕಾರ್ಯಕರ್ತೆಯರು.ಈ ಎಲ್ಲ ಸಂಘಟನೆಗಳು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಕಲ್ಯಾಣ ಮಂಡಳಿಯನ್ನು ಸ್ಥಾಪಿಸುವಂತೆ ಸಾಮೂಹಿಕವಾಗಿ ಒತ್ತಾಯಿಸು ತ್ತಿದ್ದೇವೆ. ದುಡಿಯುವ ಎಲ್ಲ ವರ್ಗದ ಜನರು ಬೆಂಗಳೂರು ಚಲೋ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ 31 ರಾತ್ರಿ ಹೊರಟು ಭಾಗವಹಿಸಬೇಕೆಂದು ಪತ್ರಿಕಾ ಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಸಮಿತಿ ತಾಲೂಕು ಅಧ್ಯಕ್ಷ ಬಾವಾಜಿ ಜಂಗ್ಲಿಸಾಬ್. ಉಪಾಧ್ಯಕ್ಷ ನಾಗರಾಜ ಕೋಟಿಹಾಳ್.ಗೌರವಾಧ್ಯಕ್ಷ ಅನ್ವರ್ ಸಾಬ್. ಎಐಕೆಎಸ್ ಡಿ.ಮುಕ್ಕುಂದ ಗೌಡ ಇತರರು ಇದ್ದರು

## ಹಂಪಿ ಉತ್ಸವಕ್ಕೆ ಸುಸಜ್ಜಿತ ಮಾಧ್ಯಮಕೇಂದ್ರ ಸಿದ್ಧತೆ



**ಹಂಪಿ ಟೈಮ್ಸ್ ಹೊಸಪೇಟೆ**

ಹಂಪಿ ಉತ್ಸವ–2024ಕ್ಕೆ ಸುಸಜ್ಜಿತ ಮಾಧ್ಯಮ ಕೇಂದ್ರದ ವ್ಯವಸ್ಥೆಯೂ ಭರದಿಂದ ಸಾಗಿದೆ. ಫೆಬ್ರವರಿ 2, 3 ಮತ್ತು 4ರಂದು ನಡೆಯುವ ಐತಿಹಾಸಿಕ ಹಂಪಿ ಉತ್ಸವದ ಸಿದ್ಧತೆಗಳು ಈಗಾಗಲೇ ಭರ್ಜರಿಯ ತಯಾರಿಗಳು ನಡೆಯುತ್ತಿದೆ. ಹಂಪಿ ಉತ್ಸವದ ಅಂಗವಾಗಿ ನಾಲ್ಕು ಮುಖ್ಯ ವೇದಿಕೆಗಳಲ್ಲಿ ಹಾಗೂ ಇನ್ನಿತರ ಸ್ಥಳಗಳಲ್ಲಿ ನಡೆಯುವ ಗೋಷ್ಠಿಗಳು ಮತ್ತು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ಬಗ್ಗೆ ವರದಿ ಮಾಡಲು ವಿಜಯನಗರ, ಬಳ್ಳಾರಿ, ಕೊಪ್ಪಳ ಸೇರಿದಂತೆರಾಜ್ಯದ ನಾನಾ ಭಾಗದಿಂದ ಬರುವ ಪತ್ರಕರ್ತರಿಗೆ ವರದಿಕಾರಿಕೆಗೆ ಅನುಕೂಲವಾಗುವಂತೆ ಹಂಪಿ ಉತ್ಸವ ಆಚರಣಾ ಕಾರ್ಯಕಾರಿ ಸಮಿತಿಯಿಂದ ಈ ಮಾಧ್ಯಮ ಕೇಂದ್ರವನ್ನು ಸಿದ್ಧಪಡಿಸಲಾಗಿದೆ.

# ಸ್ಪರ್ಷ ಕುಷ್ಠರೋಗ ಜಾಗೃತಿ ಅಭಿಯಾನ ಯಶಸ್ವಿಗೊಳಿಸಿ



**ಹಂಪಿ ಟೈಮ್ಸ್ ಬಳ್ಳಾರಿ**

ನಗರದಲ್ಲಿ ಜ.30 ರಿಂದ ಫೆ.13 ರ ವರೆಗೆ ನಡೆಯುವ ಸ್ಪರ್ಷ ಕುಷ್ಠರೋಗ ಜಾಗೃತಿ ಅಭಿಯಾನ ನಡೆಯುತ್ತಿದ್ದು, ಶಾಲಾ ಕಾಲೇಜುಗಳಿಗೆ, ಅಂಗನವಾಡಿ ಕೇಂದ್ರಗಳಿಗೆ ಆರೋಗ್ಯ ಇಲಾಖೆ ಸಿಬ್ಬಂದಿಗಳು ಭೇಟಿ ನೀಡಿದಾಗ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಮಹಾನಗರ ಪಾಲಿಕೆಯ ಸದಸ್ಯ ನಾಗಲಕೆರೆ ಗೋವಿಂದ್ ಅವರು ಹೇಳಿದರು.

ನಗರ ಆರೋಗ್ಯ ಕೇಂದ್ರ ಬಂಡಿಹಟ್ಟಿ ವ್ಯಾಪ್ತಿಯ ಆಶ್ರಯ ಕಾಲೋನಿಯಲ್ಲಿ ಬರುವ ಜಿ.ಎ.ಡಿ.ಆಸ್ಪತ್ರೆಯಲ್ಲಿ "ಕಳಂಕವನ್ನು ಕೊನೆಗೊಳಿಸಿ ಘನತೆಯನ್ನು ಎತ್ತಿ ಹಿಡಿಯಿರಿ" ಎಂಬ ಘೋಷವಾಕ್ಯದಡಿ ಏರ್ಪಡಿಸಿದ್ದ ಸ್ಪರ್ಷ ಕುಷ್ಠರೋಗ ಜಾಗೃತಿ ಅಭಿಯಾನ –2024 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಆರೋಗ್ಯ ಇಲಾಖೆ ಸಿಬ್ಬಂದಿಗಳು ಜ.31 ರಿಂದ ಫೆ.13 ರ ವರೆಗೆ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲಾ ಕಾಲೇಜುಗಳು, ಅಂಗನವಾಡಿ ಕೇಂದ್ರಗಳಿಗೆ ಭೇಟಿ ಮಾಡಿ ಪ್ರತಿಜ್ಞಾವಿಧಿ ಭೋದಿಸುವ ಮೂಲಕ ಸ್ಪರ್ಷ ಕುಷ್ಠರೋಗ ಜಾಗೃತಿ ಅಭಿಯಾನ –2024 ಕಾರ್ಯಕ್ರಮ ಕುರಿತು ವ್ಯಾಪಕ ಪ್ರಚಾರ ಮಾಡಲಾಗುತ್ತದೆ ಎಂದು ತಿಳಿಸಿದರು.

ಪ್ರಸ್ತುತ ಜಿಲ್ಲೆಯಲ್ಲಿ 88 ಪ್ರಕರಣಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದೂ ತಿಳಿಸಿದರು.

ಆರೋಗ್ಯ ನಿರೀಕ್ಷಣಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು, ಸಮುದಾಯ ಆರೋಗ್ಯ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ, ನಗರ ಸಭೆಗಳಲ್ಲಿ, ಪುರಸಭೆಗಳಲ್ಲಿ, ಪಟ್ಟಣ ಪಂಚಾಯತಿಗಳಲ್ಲಿ, ಮಹಾನಗರಪಾಲಿಕೆಗಳಲ್ಲಿ, ಆಧಿಕಾರಿಗಳು, ಸಿಬ್ಬಂದಿಗಳು, ಚುನಾಯಿತ ಜನಪ್ರತಿನಿಧಿಗಳಿಗೆ ಪ್ರತಿಜ್ಞಾವಿಧಿ ಭೋದಿಸುವ ಮೂಲಕ ಸ್ಪರ್ಷ ಕುಷ್ಠರೋಗ ಜಾಗೃತಿ ಅಭಿಯಾನ –2024 ಕಾರ್ಯಕ್ರಮ ಕುರಿತು ವ್ಯಾಪಕ ಪ್ರಚಾರ ಮಾಡಲಾಗುತ್ತದೆ. ಕ್ಷೇತ್ರ ವ್ಯಾಪ್ತಿಯಲ್ಲಿ ಡಂಗೂರ ಹಾಕಿಸುವುದು. ಕಸದ ವ್ಯಾನ್‌ಗಳ ಮೂಲಕ ಆಡಿಯೋ ಜಿಂಗಲ್ಸ್ ಹಾಕುವುರ ಮೂಲಕ ಜಾಗೃತಿ ಮೂಡಿಸಲಾಗುವುದು ಎಂದು ಹೇಳಿದರು.

ಮಹಾತ್ಮ ಗಾಂಧೀಜಿಯವರ ಕಂಡ ಕನಸು "ಕುಷ್ಠರೋಗ ಮುಕ್ತ ಭಾರತ " ಮಾಡಲು ಆರೋಗ್ಯ ಇಲಾಖೆ ಸಿಬ್ಬಂದಿಗಳು ಗ್ರಾಮ ಪಂಚಾಯತಿ, ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯತಿ, ಮಹಾನಗರ ಪಾಲಿಕೆ, ಶಾಲಾ ಕಾಲೇಜು, ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಧಿಕಾರಿಗಳು, ಚುನಾಯಿತ ಪ್ರತಿನಿಧಿಗಳು ಮತ್ತು ಸಾರ್ವಜನಿಕರು ಸಹಕಾರ ನೀಡಬೇಕು ಹಾಗು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು.

ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ.ಕೆ.ಜಿ.ವೀರೇಂದ್ರ ಕುಮಾರ್, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮಾಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್.ದಾಸಪ್ಪನವರು, ಆಡಳಿತ ವೈಧ್ಯಾಧಿಕಾರಿಗಳಾದ ಡಾ.ಕಾಶೀಪ್ರಸಾದ, ಡಾ.ಯಾಸ್ಮಿನ್, ಡಿ.ಎಫ್.ಐ.ಟಿ. ಸಮನ್ವಯ ಅಧಿಕಾರಿ ಎಸ್.ಸುಧಾಕರ, ಸೇರಿದಂತೆ ಆಶಾ ಕಾರ್ಯಕರ್ತರು ಹಾಗೂ ಇತರೆ ಸಿಬ್ಬಂದಿಯವರು ಉಪಸ್ಥಿತರಿದ್ದರು.

## ಪ್ರವಾಸಿ ಮಾರ್ಗದರ್ಶಿ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಹೊಸಪೇಟೆ**

ಪ್ರವಾಸೋದ್ಯಮ ಇಲಾಖೆಯಿಂದ 2023–24ನೇ ಸಾಲಿನಲ್ಲಿ ಪ್ರವಾಸಿ ಮಾರ್ಗದರ್ಶಿ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಪ್ರಸಕ್ತ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ 2023–24ನೇ ಸಾಲಿನಲ್ಲಿ 50 ಇತರೆ ಪ್ರವಾಸಿ ಗೈಡ್ಗಳಿಗೆ 03 ತಿಂಗಳ ಕಾಲ ತರಬೇತಿ ಹಾಗೂ ಜಲಪಾತ, ಅರಣ್ಯಧಾಮ, ಪರಿಸರಧಾಮ ಇನ್ನಿತರೆ ಪ್ರಾಕೃತಿಕ ನೈಸರ್ಗಿಕ ಪ್ರವಾಸಿ ತಾಣಗಳಲ್ಲಿ ಕಾರ್ಯನಿರ್ವಹಿಸಲು 50 ನೇಚರ್ ಗೈಡ್ಗಳಿಗೆ 02 ತಿಂಗಳ ಕಾಲ ತರಬೇತಿ ಒಟ್ಟು 100 ಜನ ಅಭ್ಯರ್ಥಿಗಳಿಗೆ ಪ್ರವಾಸಿ ಮಾರ್ಗದರ್ಶಿ ತರಬೇತಿಯನ್ನು ನೀಡಲಾಗುತ್ತದೆ.

ಆಸಕ್ತರು ಪ್ರವಾಸೋದ್ಯಮ ಇಲಾಖೆಯಲ್ಲಿ ಫೆಬ್ರವರಿ 5 ರಿಂದ ಅರ್ಜಿ ಪಡೆದುಕೊಂಡು, ಎಲ್ಲಾ ಮಾಹಿತಿಗಳನ್ನು ಸ್ಪಷ್ಟವಾಗಿ ಭರ್ತಿ ಮಾಡಿ ಹಾಗೂ ಸರಿಯಾದ ದಾಖಲೆಗಳೊಂದಿಗೆ ಫೆ.29 ರೊಳಗೆ ಪ್ರವಾಸೋದ್ಯಮ ಇಲಾಖೆಯ ಕಚೇರಿಯಲ್ಲಿ ಸಲ್ಲಿಸಬೇಕು. ಅಪೂರ್ಣ ಹಾಗೂ ಅಸ್ಪಷ್ಟ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ವಿದ್ಯಾರ್ಹತೆ, ಆಯ್ಕೆಯ ಮಾನದಂಡಗಳು, ಸಲ್ಲಿಸಬೇಕಾದ ದಾಖಲೆಗಳಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆ, ಲೋಟಸ್ ಮಹಲ್ ಹತ್ತಿರ, ಕಮಲಾಪುರ ಕಚೇರಿ ದೂರವಾಣಿ ಸಂಖ್ಯೆ: 08394–295640 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪ್ರವಾಸೋದ್ಯಮ ಸಮಿತಿಯ ಅಧ್ಯಕ್ಷರು ತಿಳಿಸಿದ್ದಾರೆ.

## ಹಂಪಿ ಉತ್ಸವಕ್ಕೆ ಬಸ್ ವ್ಯವಸ್ಥೆ

**ಹಂಪಿ ಟೈಮ್ಸ್ ಹೊಸಪೇಟೆ**

ಹಂಪಿ ಉತ್ಸವ–2024ರ ನಿಮಿತ್ಯಕಲ್ಯಾಣ ಕರ್ನಾಟಕರಸ್ತೆ ಸಾರಿಗೆ ನಿಗಮದ ಹೊಸಪೇಟೆ ವಿಭಾಗದಿಂದ ವಿಶೇಷ ಬಸ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

ಐತಿಹಾಸಿಕ ಹಂಪಿ ಉತ್ಸವವು ಫೆಬ್ರವರಿ2, 3 ಮತ್ತು 4ರಂದು ನಡೆಯಲಿದ್ದು, ಕಾರ್ಯಕ್ರಮಕ್ಕೆ ಆಗಮಿಸುವ ಸಾರ್ವಜನಿಕರ ಸಂಚಾರಕ್ಕೆ ಅನುಕೂಲ ಕಲ್ಪಿಸುವ ಹಿತದೃಷ್ಟಿಯಿಂದ ನಿಗಮವು ಬಸ್ ವ್ಯವಸ್ಥೆಯನ್ನು ಮಾಡಿದ್ದು, ಹೋಸಪೇಟೆ ಕೇಂದ್ರ ಬಸ್ ನಿಲ್ದಾಣದಿಂದ ಕಡ್ಡಿರಾಂಪುರ ಕ್ರಾಸ್–ಹಂಪಿ–ಕಮಲಾಪುರ–ಕಡ್ಡಿರಾಂಪುರ ಕ್ರಾಸ್ ಮಾರ್ಗವಾಗಿ ದುಂಡು ಸುತ್ತುಗಳಲ್ಲಿ ಉಚಿತ ಬಸ್‌ಗಳನ್ನು ಕಾರ್ಯಾಚರಣೆ ಮಾಡಲಿವೆ. ಈ ಬಸ್‌ಗಳಲ್ಲಿ 5 ಹಸಿರು ಬಣ್ಣದ ಬಸ್‌ಗಳನ್ನು ವಿಶೇಷವಾಗಿ ಮಹಿಳೆಯರಿಗಾಗಿ ಮೀಸಲಿದ್ದು, ಅಲ್ಲದೇ ಫೆ.2ರಂದು ವಿಜಯನಗರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಂದ ವಿಶೇಷ ಬಸ್ ವ್ಯವಸ್ಥೆಕಲ್ಪಿಸಲಾಗುವುದು ಎಂದು ಕ.ಕ.ರ.ಸಾ ನಿಗಮ ಹೊಸಪೇಟೆ ವಿಭಾಗದ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

# ಸ್ವಚ್ಛತೆಯ ಪರಿಪಾಲನೆ ಪ್ರತಿಯೊಬ್ಬರ ಕರ್ತವ್ಯ

### ನ್ಯಾ.ಎಸ್.ಹೆಚ್.ಪುಷ್ಪಾಂಜಲಿ ದೇವಿ ಹೇಳಿಕೆ



**ಹಂಪಿ ಟೈಮ್ಸ್ ಬಳ್ಳಾರಿ**

ಎಲ್ಲರೂ ಸ್ವಚ್ಛತೆ ಕಾರ್ಯವನ್ನು ಕೈಗೊಳ್ಳಬೇಕು ಹಾಗೂ ದಿನನಿತ್ಯ ಇದನ್ನು ಪರಿಪಾಲನೆ ಮಾಡಬೇಕು. ಇದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಎಸ್.ಹೆಚ್.ಪುಷ್ಪಾಂಜಲಿ ದೇವಿ ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಮತ್ತು ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ "ರಾಷ್ಟೀಯ ಸ್ವಚ್ಛತಾ ದಿನಾಚರಣೆ" ಅಂಗವಾಗಿ ನಗರದ ತಾಳೂರು ರಸ್ತೆಯ ನೂತನ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ "ಕಸ ಮುಕ್ತ ಭಾರತ" ಕಾರ್ಯಕ್ರಮದ "ಜಾಗೃತಿ ಅಭಿಯಾನ"ದ ವಿಡಿಯೋ ಪ್ರದರ್ಶನಕ್ಕೆ ಬಟನ್ ಒತ್ತುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಸ್ವಚ್ಛತೆ ಕಾಪಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದ್ದು, ಎಲ್ಲರೂ ನಮ್ಮ ಸುತ್ತ–ಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಸ್ವಚ್ಛತಾ ಕಾರ್ಯ ಒಂದು ದಿನಕ್ಕೆ ಸೀಮಿತವಾಗದೆ, ದಿನನಿತ್ಯ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಳ್ಳುವುದು ಅಗತ್ಯವಾಗಿದೆ. ಕಸವನ್ನು ಎಲ್ಲೆಂದರಲ್ಲೆ ಬೀಸಾಡದೆ, ನಿಗದಿಪಡಿಸಿದ ವಾಹನಗಳಿಗೆ ಕಸ ನೀಡಬೇಕು ಎಂದು ತಿಳಿಸಿದರು.

ರಾಷ್ಟ್ರೀಯ ಸ್ವಚ್ಛತಾ ದಿನಾಚರಣೆ ಅಂಗವಾಗಿ "ನಾಗರೀಕರ ಸ್ವಚ್ಛತೆಯ ಕರ್ತವ್ಯ" ಎಂಬ ಭಿತ್ತಿಚಿತ್ರಗಳನ್ನು ಗಣ್ಯರು ಬಿಡುಗಡೆಗೊಳಿಸಿದರು. ಕಾರ್ಯಕ್ರಮದಲ್ಲಿ ಶ್ವಾಸ್ ಇಂಡಿಯಾ ಎನ್.ಜಿ.ಓ.ನ ಶಶಿಧರ್ ಕಲ್ಮತ್ ಅವರು ಜಾಗೃತಿ ಅಭಿಯಾನದ ಉದ್ದೇಶ ಹಾಗೂ ಕರ್ತವ್ಯಗಳ ಕುರಿತು ವಿಶ್ಲೇಷಣೆ ನೀಡಿದರು.

ಬಳಿಕ "ರಾಷ್ಟೀಯ ಸ್ವಚ್ಛತಾ ದಿನಾಚರಣೆ ಅಂಗವಾಗಿ ಜಿಲ್ಲಾ ನ್ಯಾಯಾಧೀಶರಿಂದ ನ್ಯಾಯಾಲಯದ ಆವರಣದಲ್ಲಿ ಸ್ವಚ್ಛತಾ ಕಾರ್ಯ ನಡೆಯಿತು.

ಈ ಸಂದರ್ಭದಲ್ಲಿ ಪ್ರಿನ್ಸಿಪಲ್ ಕೌಟುಂಬಿಕ ನ್ಯಾಯಾಧೀಶರಾದ ಸಿದ್ಧಲಿಂಗ ಪ್ರಭು, ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ವಿನಯ್.ಡಿ, 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ವಿದ್ಯಾಧರ ಶಿರಹಟ್ಟಿ, 4ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ವಿಮಲ್ ಆರ್.ನಂದಾಗಾಂವ್, ಪ್ರಿನ್ಸಿಪಲ್ ಹಿರಿಯ ಶ್ರೇಣಿ ಹಾಗೂ ಸಿಜೆಎಂ ನ್ಯಾಯಾಧೀಶರಾದ ಸತೀಶ್ ಜೆ.ಬಾಳಿ, ಒಂದನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ಅಪರ್ಣ, ಎರಡನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ನಸ್ರತ್ ಮುಖ್ತಾರ್ ಅಹ್ಮದ್ ಖಾನ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ರಾಜೇಶ್.ಎನ್.ಹೊಸಮನೆ, ಪ್ರಿನ್ಸಿಪಲ್ ಕಿರಿಯ ಶ್ರೇಣಿ ಹಾಗೂ ಸಿಜೆಎಂ ನ್ಯಾಯಾಧೀಶರಾದ ಅಮೀತ್ ಘಟ್ಟಿ, 1ನೇ ಕಿರಿಯ ಅಪರ ಸಿವಿಲ್ ನ್ಯಾಯಾಧೀಶರಾದ ಈರಪ್ಪ ದವಳೇಶ್ವರ, 2ನೇ ಕಿರಿಯ ಅಪರ ಸಿವಿಲ್ ನ್ಯಾಯಾಧೀಶರಾದ ಸಣ್ಣಹನಮಗೌಡ, 4ನೇ ಕಿರಿಯ ಅಪರ ಸಿವಿಲ್ ನ್ಯಾಯಾಧೀಶರಾದ ರೂಪ ಚಿನಿವಾರ, 5ನೇ ಕಿರಿಯ ಅಪರ ಸಿವಿಲ್ ನ್ಯಾಯಾಧೀಶರಾದ ಮುದುಕಪ್ಪ ಒಡನ್ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಪಿ.ಯು.ಸಿ. ಬೀಳ್ಕೊಡುಗೆ ಸಮಾರಂಭ

### ಉಪನ್ಯಾಸಕರ ಜೊತೆ ವಿದ್ಯಾರ್ಥಿಗಳು ಉತ್ತಮ ಸಂಬಂಧ ಹೊಂದಿರಬೇಕು



**ಹಂಪಿ ಟೈಮ್ಸ್ ಹರಪನಹಳ್ಳಿ**

ತಾಲ್ಲೂಕಿನ ಕಂಚಿಕೆರೆ ಗ್ರಾಮದ ಸರ್ಕಾರಿ ಸ್ವತಂತ್ರ ಪದವಿಪೂರ್ವ ಕಾಲೇಜಿನಲ್ಲಿ 2023–24 ನೇ ಸಾಲಿನ ಶೈಕ್ಷಣಿಕ ವರ್ಷದ ಸರಸ್ವತಿ ಪೂಜೆ ಮತ್ತು ದ್ವಿತೀಯ ಪಿ. ಯು.ಸಿ. ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಉಪನಿರ್ದೇಶಕರಾದ ಟಿ. ಪಾಲಾಕ್ಷಪ್ಪ ನವರು ಈ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ:–ಈ ಕಾಲೇಜಿಗೆ ಪ್ರತಿವರ್ಷ ಉತ್ತಮ ಫಲಿತಾಂಶ ಬರುತ್ತಿದೆ, ಜಿಲ್ಲೆಯಲ್ಲಿಯೇ ಈ ಕಾಲೇಜು ಉತ್ತಮವಾದ ಸರ್ಕಾರಿ ಕಾಲೇಜಾಗಿದೆ.

ಹಾಗಾಗಿ ಈ ಕಾಲೇಜಿನ ಬಗ್ಗೆ ಹೆಮ್ಮೆಯಿದೆ, ಈ ವರ್ಷ ಶೇಕಡ 100% ಫಲಿತಾಂಶ ಬರಲಿದೆ ಎಂಬ ನಿರೀಕ್ಷೆಯಿದೆ, ಉಪನ್ಯಾಸಕರು ವಿದ್ಯಾರ್ಥಿಗಳಿಗೆ ಎಲ್ಲಾ ಸವಲತ್ತುಗಳನ್ನು ನೀಡಿರುವುದರಿಂದ ಉತ್ತಮ ಫಲಿತಾಂಶ ಬರಲಿದೆ ಎಂಬ ನಂಬಿಕೆಯಿದೆ.

ಪ್ರಾಂಶುಪಾಲರು 35 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ನಲ್ಲಿ ಪಾಸಾಗಲಿದ್ದಾರೆ ಎಂದು ಹೇಳಿದ್ದಾರೆ, ಇನ್ನೂ ಪರೀಕ್ಷೆಗೆ ಸಮಯವಿದೆ ಆದಷ್ಟು ಸಾಧನೆ ಮಾಡಿ ಎಲ್ಲರೂ ಡಿಸ್ಟಿಂಕ್ಷನ್ ನಲ್ಲಿ ಪಾಸಾಗಿ ಶೇಕಡಾ 100% ಫಲಿತಾಂಶ ತಂದು ಇಡೀ ರಾಜ್ಯಕ್ಕೆ ಮಾದರಿಯಾಗಬೇಕು ಎಂದು ಹೇಳಿದರು.

ದಾವಣಗೆರೆ ಜಿಲ್ಲಾ ನೌಕರರ ಸಂಘದ ಅಧ್ಯಕ್ಷರು ಬಿ. ಪಾಲಾಕ್ಷ ಮಾತನಾಡಿ:–ವಿದ್ಯಾರ್ಥಿಗಳ ಜೀವನದಲ್ಲಿ ಶಿಸ್ತು,ಜ್ಞಾನ ಸಂಪಾದನೆ, ಸಂಚಾರಿತ್ರ್ಯ, ಇವುಗಳನ್ನು ಅಳವಡಿಸಿಕೊಂಡರೆ ಮುಂದಿನ ನಿಮ್ಮ ಜೀವನದಲ್ಲಿ ಯಶಸ್ಸು ಕಾಣಬಹುದು. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಹೆಚ್ಚು ಶ್ರಮ ಪಡುವುದರಿಂದ ಉನ್ನತ ಹುದ್ದೆಗೆ ಹೋಗಬಹುದು ಎಂದು ಹೇಳಿದರು.

ಕಾಲೇಜು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಾ. ಕೊಟ್ರೇಶ್ ಬಿದ್ರಿ ಮಾತನಾಡಿ:–ಪಿಯುಸಿ. ವಿದ್ಯಾರ್ಥಿಗಳನ್ನು ಯೋಧರಂತೆ ಪರೀಕ್ಷೆ ಎಂಬ ಯುದ್ಧಕ್ಕೆ ರೆಡಿಮಾಡಿ ಕಳಿಸಬೇಕಾಗಿದೆ,ಯೋಧರಂತೆ ಇವರನ್ನು ಪರೀಕ್ಷೆ ಎಂಬ ಯುದ್ಧಕ್ಕೆ ತಯಾರು ಮಾಡಿ ಕಳಿಸಿ ಉತ್ತಮ ಅಂಕಗಳನ್ನು ಗಳಿಸುವಂತೆ ಮಾಡಬೇಕಾಗಿದೆ.

ನಮ್ಮ ಕಾಲೇಜು ಖಾಸಗಿ ಕಾಲೇಜುಗಳಿಗಿಂತ ಯಾವುದರಲ್ಲೂ ಕಡಿಮೆಯಿಲ್ಲ, ಪ್ರತಿವರ್ಷ ಉತ್ತಮ ಫಲಿತಾಂಶ ಬರುತ್ತಿದೆ, ಇನ್ನೂ ಹೆಚ್ಚು ಹೆಚ್ಚಾಗಿ ಅಂಕ ಗಳಿಸಿ ಉತ್ತಮ ಶ್ರೇಣಿಯಲ್ಲಿ ಪಾಸಾಗಬೇಕು, ಈ ಕಾಲೇಜಿನಲ್ಲಿ ಉತ್ತಮ ಉಪನ್ಯಾಸಕರಿದ್ದು, ಒಳ್ಳೆಯ ಶಿಕ್ಷಣ ನೀಡುತ್ತಿದ್ದಾರೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ರೀಡೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ನೀಡಿದರು.

ಈ ಕಾರ್ಯಕ್ರಮದಲ್ಲಿ ಈ ಕಾಲೇಜಿನ ಪ್ರಾಂಶುಪಾಲಾರಾದ ವೀರಪ್ಪ ಚಳಗೇರಿ ಅಧ್ಯಕ್ಷತೆ ವಹಿಸಿದ್ದರು, ಮುಖ್ಯ ಅತಿಥಿಗಳಾಗಿ ಅನುರಾಧ ಬಿದ್ರಿ ಕೊಟ್ರೇಶ್, ಛಾಯಾ ಕುಮಾರಿ ನಿವೃತ್ತ ಪ್ರಾಂಶುಪಾಲರು,ಮರೀಗೌಡ್ರು, ಬಸವನಗೌಡ್ರು, ಸುನೀಲ್ ಬಿದ್ರಿ, ಅಂಜಿನಪ್ಪ, ಗುಂಡಗತ್ತಿ ಬಸವರಾಜ್, ವಿವಿಧ ಕಾಲೇಜಿನ ಪ್ರಾಂಶುಪಾಲರಾದ ರಾಮಚಂದ್ರಪ್ಪ ಲಕ್ಷ್ಮೀಪುರ, ವೆಂಕಟೇಶ್ ಹಲವಾಗಲು,ಸುರೇಶ್ ಮಾದೀಹಳ್ಳಿ, ಹಾಲೇಶಪ್ಪ ಶಿಂಗ್ರೀಹಳ್ಳಿ, ಕುಮಾರ್ ನಾಯ್ಕ್ ಅರಸೀಕೆರೆ,ಎಲ್ಲಾ ಕಾಲೇಜಿನ ಉಪನ್ಯಾಸಕರು, ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.




Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA